Suddi Bidugade, 14.10.2019

# ‘ಕಿದು ಸಂಸ್ಥೆ ಕೃಷಿ ಶಿಕ್ಷಣ ಕೇಂದ್ರವಾಗಿ ಅಭಿವೃದ್ಧಿ’

## ಕೃಷಿ ಮೇಳದಲ್ಲಿ ಸಂಸದ ನಳಿನ್ ಕುಮಾರ್ ಕಟೀಲ್

ಕಡಬ: ದಕ್ಷಿಣ ಏಷ್ಯಾದ ಅಂತರಾಷ್ಟ್ರೀಯ ತೆಂಗು ಜೀನ್ ಬ್ಯಾಂಕ್ ಕಿದು ಸಂಸ್ಥೆಯನ್ನು ಮುಂದಿನ ಎರಡು ವರ್ಷಗಳಲ್ಲಿ ಕೃಷಿ ಅಧ್ಯಯನ ಶಿಕ್ಷಣ ಕೇಂದ್ರವಾಗಿ ಅಭಿವೃದ್ಧಿ ಪಡಿಸಲಾಗುವುದು ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರೂ ಆಗಿರುವ ದ.ಕ. ಸಂಸದ ನಳಿನ್‌ಕುಮಾರ್ ಕಟೀಲು ಹೇಳಿದರು.

ಕೇಂದ್ರೀಯ ತೋಟಗಾರಿಕಾ ಬೆಳೆಗಳ ಸಂಶೋಧನಾ ಸಂಸ್ಥೆ ಕಿದುವಿನಲ್ಲಿ ನಡೆಯುತ್ತಿರುವ ಎರಡು ದಿನಗಳ ಕೃಷಿ ಮೇಳ ಹಾಗೂ ತೋಟಗಾರಿಕಾ (೯ನೇ ಪುಟಕ್ಕೆ)

# ‘ಕಿದು ಸಂಸ್ಥೆ ಕೃಷಿ ಶಿಕ್ಷಣ ಕೇಂದ್ರವಾಗಿ ಅಭಿವೃದ್ಧಿ’

(ಒಂದನೇ ಪುಟದಿಂದ)




ಮೇಳಕ್ಕೆ ಅ.13ರಂದು ಭೇಟಿ ನೀಡಿದ ಅವರು ಕೃಷಿಕರನ್ನು ಉದ್ದೇಶಿಸಿ ಮಾತನಾಡಿದರು. 2002ರಿಂದ ಕಿದು ಸಂಸ್ಥೆ ತೊಂದರೆಗೆ ಒಳಗಾಗಿದೆ. ಅರಣ್ಯ ಇಲಾಖೆಯಿಂದ ಲೀಸಿಗೆ ಪಡೆದ ಅವಧಿ ಮುಕ್ತಾಯಗೊಂಡಿದ್ದು ನವೀಕರಣಕ್ಕೆ ಸಂಬಂಧಿಸಿ ಸಮಸ್ಯೆಗಳಿವೆ. ಅದಕ್ಕೆ ಕಾನೂನು ತೊಡಕು ಅಡ್ಡಿಯಾಗಿದೆ. ಅವುಗಳ ನಿವಾರಣೆಗೆ ಕೇಂದ್ರ ಸಚಿವ ಡಿ.ವಿ ಸದಾನಂದ ಗೌಡರ ನೇತೃತ್ವದಲ್ಲಿ ಕೇಂದ್ರ ಮಟ್ಟದಲ್ಲಿ ಪ್ರಯತ್ನ ನಡೆದಿದೆ. ಜತೆಗೆ ಕಿದು ಕೇಂದ್ರವನ್ನು ಕೃಷಿ ಅಧ್ಯಯನ ಶಿಕ್ಷಣ ಸಂಸ್ಥೆಯಾಗಿ ಅಭಿವೃದ್ಧಿಗೊಳಿಸುವ ಬಗ್ಗೆಯೂ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಕಿದು ಕೇಂದ್ರದಲ್ಲಿ ಕೃಷಿ ಮೇಳ ಉತ್ತಮವಾಗಿ ನಡೆಯುತ್ತಾ ಬಂದಿದೆ. ಜಿಲ್ಲೆಯ ಎಲ್ಲ ಸಹಕಾರಿ ಸಂಘಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಇನ್ನಷ್ಟು ಉತ್ತಮವಾಗಿ ಕೃಷಿ ಮೇಳಗಳನ್ನು ಆಯೋಜಿಸುವ ಅಗತ್ಯವಿದೆ ಎಂದರು. ಕೃಷಿ ಮೇಳಕ್ಕೆ ಭೇಟಿ ನೀಡಿದ ಸುಳ್ಯ ಶಾಸಕ ಎಸ್. ಅಂಗಾರ ಅವರು ಭಾರತ ಕೃಷಿ ಪ್ರಧಾನ ಆರ್ಥಿಕ ಮೂಲ ಹೊಂದಿದೆ. ಇತರ ದೇಶಗಳಿಗಿಂತ ಭಿನ್ನ ಆರ್ಥಿಕತೆ ನಮ್ಮ ದೇಶದ್ದು. ಸಂಪತ್ಭರಿತ ಕೃಷಿ ಕ್ಷೇತ್ರವನ್ನು ಸದೃಢಗೊಳಿಸುವ ಕಾಲ ಇಂದಿನದ್ದಾಗಿದ್ದು ಕೃಷಿ ಮೇಳ ಇದಕ್ಕೆ ಸಹಕಾರಿ ಎಂದರು. ಐಸಿಎಆರ್ ನಿರ್ದೇಶಕಿ ಡಾ ಅನಿತ ಕರೂಣ್ ಅಧ್ಯಕ್ಷತೆ ವಹಿಸಿ ಸಂಸ್ಥೆ ಎದುರಿಸುತ್ತಿರುವ ಸಮಸ್ಯೆಗಳನ್ನು ಸಂಸದರ ಮತ್ತು ಶಾಸಕರ ಗಮನಕ್ಕೆ ತಂದರು. ಅಧಿಕಾರಿಗಳಾದ ಡಾ. ಮುರಳೀಧರ್, ಡಾ ರವಿ ಭಟ್, ಡಾ ವಿ ನಿರಾಳ್, ಡಾ. ಕೆ ಸಂಶುದ್ದೀನ್ ಉಪಸ್ಥಿತರಿದ್ದರು.

### ಕೃಷಿ ಮೇಳ ಉದ್ಘಾಟನೆ:

ತೋಟಗಾರಿಕೆ ಬೆಳೆಗಳಲ್ಲಿ ಹೆಚ್ಚು ಸಂಶೋಧನೆಗಳು ನಡೆಯುವಂತಾಗಬೇಕು. ಹೀಗಾದಾಗ ಕೃಷಿಕರು ಸ್ವಾಭಿಮಾನದ ಬದುಕಲು ಸಾಧ್ಯ ಎಂದು ಕ್ಯಾಂಪ್ಕೋ ಅಧ್ಯಕ್ಷ ಎಸ್. ಆರ್ ಸತೀಶ್ಚಂದ್ರ ಹೇಳಿದರು. ಕೇಂದ್ರೀಯ ತೋಟಗಾರಿಕಾ ಬೆಳೆಗಳ ಸಂಶೋಧನಾ ಸಂಸ್ಥೆ ಕಿದು ಸಂಶೋಧನಾ ಕೇಂದ್ರದಲ್ಲಿ ಅ.12ರಂದು ಆರಂಭಗೊಂಡ ಎರಡು ದಿನಗಳ ಕೃಷಿ ಮತ್ತು ತೋಟಗಾರಿಕಾ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಿಪಿಸಿಆರ್ ನಿರ್ದೇಶಕಿ ಡಾ. ಅನಿತಾ ಕರೂಣ್ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಯಾಗಿ ಕುಕ್ಕೆಶ್ರೀ ಸುಬ್ರಹ್ಮಣ್ಯ ದೇವಳದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ನಿತ್ಯಾನಂದ ಮುಂಡೋಡಿ ಆಗಮಿಸಿದ್ದರು.

ಪುತ್ತೂರು ತಾ.ಪಂ ಅಧ್ಯಕ್ಷ ರಾಧಾಕೃಷ್ಣ ಬೋರ್ಕರ್ ಕೃಷಿ ಪ್ರಕಟಣೆಗಳನ್ನು ಬಿಡುಗಡೆಗೊಳಿಸಿದರು. ವೇದಿಕೆಯಲ್ಲಿ ಬಿಳಿನೆಲೆ ಗ್ರಾ.ಪಂ ಅಧ್ಯಕ್ಷೆ ಶಾರದಾ ದಿನೇಶ್, ಜಿ.ಪಂ ಸದಸ್ಯ ಪಿ.ಪಿ ವರ್ಗೀಸ್, ಗ್ರಾ.ಪಂ ಸದಸ್ಯ ಸತೀಶ್ ಕಳಿಗೆ, ಕೃಷಿ ನಿರ್ದೇಶಕ ಭಾನುಪ್ರಕಾಶ್, ಪುತ್ತೂರು ಐಸಿಎಆರ್ ಡಿಸಿಆರ್ ನಿರ್ದೇಶಕ ಡಾ. ಗಂಗಾಧರ ನಾಯಕ್, ಹಾಗೂ ಸಿಪಿಸಿಆರ್‌ಐ ನಿರ್ದೇಶಕರುಗಳು ಉಪಸ್ಥಿತರಿದ್ದರು.

ಮೊದಲ ದಿನದ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಸುಬ್ರಹ್ಮಣ್ಯ ನರಸಿಂಹ ಮಠದ ಶ್ರೀ ವಿದ್ಯಾಪ್ರಸನ್ನ ತೀರ್ಥ ಸ್ವಾಮೀಜಿ ಆಶೀರ್ವಚನ ನೀಡಿದರು.

ಸಿಪಿಸಿಆರ್‌ಐ ನಿರ್ದೇಶಕಿ ಅನಿತಾ ಕರೂನಾ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭ ಕೃಷಿ ಮೇಳ ಪ್ರಯುಕ್ತ ನಡೆದ ರಸಪ್ರಶ್ನೆ ಸ್ಪರ್ಧೆ ವಿಜೇತರಿಗೆ ಹಾಗೂ ಪ್ರಬಂಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಸಂಸ್ಥೆಗೆ ನಿರಂತರ ಸಹಕಾರ ನೀಡಿದ ಶೀನಪ್ಪ ಗೌಡ, ಸುಬ್ರಾಯ ಗೌಡ ಇವರುಗಳನ್ನು ಸಮ್ಮಾನಿಸಿ ಗೌರವಿಸಲಾಯಿತು. ವೇದಿಕೆಯಲ್ಲಿ ನಿರ್ದೇಶಕರಾದ ಡಾ. ವಿ. ನಿರಾಳ್, ಉಪಸ್ಥಿತರಿದ್ದರು.

ಪುತ್ತೂರು, ಸುಳ್ಯ, ಬೆಳ್ತಂಗಡಿ ಸುದ್ದಿ ಪತ್ರಿಕೆ ವೆಬ್‌ಸೈಟ್‌ನಲ್ಲಿ ಲಭ್ಯ
ವೆಬ್‌ಸೈಟ್: www.suddimahithi.com or www.suddi.net